RNU AIR DHARWAD

# JANUARY 19,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

**ದೇಶದ ಸಂವಿಧಾನ ಜಾರಿಗೆ ಬಂದು 75 ವರ್ಷಗಳು ಪೂರ್ಣಗೊಳ್ಳುತ್ತಿವೆ. ಪವಿತ್ರ ಸಂವಿಧಾನವನ್ನು ನಮಗೆ ನೀಡಿದ ಸಂವಿಧಾನ ರಚನಾ ಸಮಿತಿಯ ಎಲ್ಲ ಮಹನೀಯರಿಗೆ ವಂದಿಸುತ್ತೇನೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ಇಂದು ಪ್ರಸಾರವಾದ 'ಮನ್ ಕಿ ಬಾತ್' ನ 118 ನೇ ಆವೃತ್ತಿಯಲ್ಲಿ, ದೇಶ ವಿದೇಶಗಳ ಭಾರತೀಯರನ್ನು ಉದ್ದೇಶಿಸಿ ಮಾತನಾಡಿದ ಅವರು, ಜನವರಿ 25 ರಂದು ರಾಷ್ಟ್ರೀಯ ಮತದಾರರ ದಿನವಾಗಿದೆ. ಈ ದಿನದಂದು ಭಾರತೀಯ ಚುನಾವಣಾ ಆಯೋಗ ಸ್ಥಾಪನೆಯಾಗಿತ್ತು. ಸಂವಿಧಾನದಲ್ಲಿ ಚುನಾವಣಾ ಆಯೋಗಕ್ಕೆ ಹಾಗೂ ಪ್ರಜಾಪ್ರಭುತ್ವದಲ್ಲಿ ಜನರ ಭಾಗವಹಿಸುವಿಕೆಗೆ ಬಹು ದೊಡ್ಡ ಸ್ಥಾನವನ್ನು ನೀಡಲಾಗಿದೆ ಎಂದರು. ಎಲ್ಲ ದೇಶವಾಸಿಗಳಿಗೂ ಮುಂಚಿತವಾಗಿ ಗಣರಾಜೋತ್ಸವದ ಶುಭಾಶಯಗಳನ್ನು ಕೋರಿದರು. ಪ್ರಯಾಗರಾಜ್ ನಲ್ಲಿ ನಡೆಯುತ್ತಿರುವ ಮಹಾಕುಂಭಮೇಳದ ಬಗ್ಗೆ ಉಲ್ಲೇಖಿಸಿದ ಪ್ರಧಾನಮಂತ್ರಿ ಅವರು, ಇದು ಸಮಾನತೆ ಹಾಗೂ ಸಾಮರಸ್ಯದ ಅಸಾಧಾರಣ ಸಂಗಮವಾಗಿದೆ ಎಂದರು.**

<><><>

**ಇಂದು ಸಂತ ಮಹಾಯೋಗಿ ಶ್ರೀ ವೇಮನ ಜಯಂತಿ, ಶ್ರೀ ವೇಮನರ ಜಯಂತಿಯಂದು, ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಭಾರತೀಯ ದರ್ಶನ, ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ ಸಂತಕವಿ, ಕ್ರಾಂತಿಕಾರಿ ಚಿಂತಕ, ಸಮಾಜ ಸುಧಾರಕ, ಮಹಾಯೋಗಿ ಶ್ರೀ ವೇಮನರ ಜಯಂತಿಯಂದು, ಸಮಸ್ತ ಜನತೆಗೆ ಶುಭಾಶಯಗಳು ಎಂದು ರಾಜ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರಾದ ಹೆಚ್.ಕೆ ಪಾಟೀಲ್ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಶ್ರೀ ವೇಮನ ಜಯಂತಿಯ ಶುಭಾಶಯ ಕೋರಿದ್ದಾರೆ.**

<><><>

**ವಿಜಯಪುರ ಜಿಲ್ಲೆಯಲ್ಲಿ ಕ್ಷಯ ರೋಗದಿಂದ ಬಳಲುವ ರೋಗಿಗಳಿಗೆ 2024 ನವೆಂಬರ್ ನಿಂದ, ಪ್ರತಿ ತಿಂಗಳು 1000 ರೂಪಾಯಿಗಳನ್ನು ನೇರವಾಗಿ ಡಿಬಿಟಿ ಮೂಲಕ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ನಿಕ್ಷಯ್ ಪೋ 'ಣ್ ಅಭಿಯಾನ' ದ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾಕ್ಟರ್ ಸಂಪತ್ ಗುಣಾರಿ**

<><><>

ಬೈಟ್: ಡಾಕ್ಟರ್ ಸಂಪತ್ ಗುಣಾರಿ 37 ಸೆಕೆಂದುಗಳು

<><><>

ಬಳ್ಳಾರಿಯಲ್ಲಿ ಮೂರು ದಿನಗಳ ಕಾಲ ವಾಸ್ತವ್ಯ ಹೂಡಿದ್ದ ಉಪ ಲೋಕಾಯುಕ್ತ ಬಿ.ವೀರಪ್ಪ ಅವರು, ಎರಡು ದಿನಗಳ ದೂರು ಮತ್ತು ಅಹವಾಲು ಸ್ವೀಕಾರ ಸಭೆಗಳಲ್ಲಿ, ಒಟ್ಟು 177 ಹೊಸ ದೂರುಗಳ ವಿಚಾರಣೆ ಕೈಗೆತ್ತಿಕೊಳ್ಳಲಾಯಿತು. ಅದರಲ್ಲಿ 68 ದೂರುಗಳನ್ನು ವಿಲೇವಾರಿಗೊಳಿಸಲಾಗಿದೆ. 97 ಬಾಕಿ ಇರುವ ದೂರುಗಳ ವಿಚಾರಣೆಯಲ್ಲಿ 19 ದೂರುಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದರು.

<><><>

ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ–2025 ರ ಅಂಗವಾಗಿ ಧಾರವಾಡದ ಕೆ.ಸಿ.ಡಿ ಆವರಣದಲ್ಲಿ, 36 ನೇ ರಸ್ತೆ ಸುರಕ್ಷಾ ಮಾಸಾಚರಣೆಗೆ ಚಾಲನೆ ನೀಡಲಾಯಿತು. ಉಪ ಸಾರಿಗೆ ಆಯುಕ್ತ ಹಾಗೂ ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿ ನೂರ್ ಮೊಹಮ್ಮದ್ ಬಾಷಾ ರಸ್ತೆ ಸುರಕ್ಷಾ ಮಾಸಾಚರಣೆಯನ್ನು ಉದ್ಘಾಟಿಸಿ ರಸ್ತೆ ಸುರಕ್ಷಾ ನಿಯಮಗಳನ್ನು ಪಾಲಿಸುವಂತೆ ಕರೆ ನೀಡಿದರು.

<><><>

ಮಂಗಳೂರಿನ ತಣ್ಣೀರುಬಾವಿ ಕಡಲ ಕಿನಾರೆಯಲ್ಲಿ ಆಯೋಜಿಸಿರುವ ಅಂತಾರಾಷ್ಟ್ರೀಯ ಮಟ್ಟದ ಗಾಳಿಪಟ ಉತ್ಸವಕ್ಕೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಚಾಲನೆ ನೀಡಿದರು.

<><><>

ಕರ್ನಾಟಕ ರಾಜ್ಯ ಅಲೆಮಾರಿ ಮತ್ತು ಅರೆ ಅಲೆಮಾರಿ ಜನಾಂಗಗಳ ಒಕ್ಕೂಟದಿಂದ ಇಂದು ದಾವಣಗೆರೆಯಲ್ಲಿ ರಾಜ್ಯಮಟ್ಟದ ಅಲೆಮಾರಿ ಮತ್ತು ಅರೆ ಅಲೆಮಾರಿ ಸಾಹಿತ್ಯ, ಸಾಂಸ್ಕೃತಿಕ ಕಲೋತ್ಸವ ಆಯೋಜಿಸಲಾಗುತ್ತಿದೆ ಎಂದು ಒಕ್ಕೂಟದ ಗೌರವಾಧ್ಯಕ್ಷ ಕೆ.ರವೀಂದ್ರ ಶೆಟ್ಟಿ ತಿಳಿಸಿದ್ದಾರೆ.

<><><>

ವಡೋದರಾದಲ್ಲಿ ಜರುಗಿದ ವಿಜಯ ಹಜಾರೆ ಕ್ರಿಕೆಟ್ ಪಂದ್ಯಾವಳಿಯಲ್ಲಿ ಕರ್ನಾಟಕ ತಂಡವು ವಿದರ್ಭ ತಂಡವನ್ನು 36 ರನ್ ಗಳಿಂದ ಮಣಿಸಿ, ದೇಶಿಯ ಏಕದಿನ ಚಾಂಪಿಯನ್ ಪಟ್ಟ ಅಲಂಕರಿಸಿದೆ. ಅದ್ವಿತೀಯ ಗೆಲುವು ಸಾಧಿಸಿ ಐದನೇ ಬಾರಿ ಚಾಂಪಿಯನ್ ಆಗಿ ಹೊರಹೊಮ್ಮಿದ ಕರ್ನಾಟಕ ತಂಡದ ಆಟಗಾರರಿಗೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಮ್ಮ ಎಕ್ಸ್ ಖಾತೆ ಮೂಲಕ ಅಭಿನಂದನೆ ಸಲ್ಲಿಸಿದ್ದಾರೆ.

<><><>

ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ರಾ.ಹ. ದೇಶಪಾಂಡೆ ಸಭಾಭವನದಲ್ಲಿ ಇಂದು ಸಂಜೆ 5 ಗಂಟೆಗೆ, ಇತ್ತೀಚೆಗೆ ಅಗಲಿದ ಖ್ಯಾತ ಸಿನಿಮಾ ನಿರ್ದೇಶಕ, ಶ್ಯಾಮ್ ಬೆನಗಲ್ ಸ್ಮರಣಾರ್ಥ, ಅವರ ನಿರ್ದೇಶನದ 'ವೆಲ್ ಡನ್ ಅಬ್ಬಾ' ಸಿನಿಮಾ ಪ್ರದರ್ಶನವಾಗಲಿದೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..**

<><><>